All India Radio: Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

05.04.2025 2.30 P.M.

<><><><>

ಮುಖ್ಯಾಂಶಗಳು

- ರಾಜ್ಯದೆಲ್ಲೆಡೆ ಬಾಬು ಜಗಜೀವನ್ ರಾಮ್ ೧೧೮ನೇ ಜಯಂತಿ ಆಚರಣೆ - ಗಣ್ಯರಿಂದ ಸ್ಮರಣೆ
- ಇಂಡಿಯನ್ ಓಷನ್ ಶಿಪ್ ಸಾಗರ್‌ಗೆ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಕಾರವಾರದಲ್ಲಿಂದು ಹಸಿರು ನಿಶಾನೆ
- ಬೆಂಗಳೂರಿನ ಪಾದರಾಯನಪುರ-ಹೊಸಹಳ್ಳಿ ಮೇಲ್ಸೇತುವೆ, ನಾಯಂಡಹಳ್ಳಿ ರೈಲು ನಿಲ್ದಾಣ ಪರಿಶೀಲನೆ ನಡೆಸಿದ ಸಚಿವ ವಿ. ಸೋಮಣ್ಣ
- ಬಿಜೆಪಿ ಕಾರ್ಯಕರ್ತನ ಆತ್ಮಹತ್ಯೆ ಪ್ರಕರಣ ; ತಪ್ಪಿತಸ್ಥರ ವಿರುದ್ಧ ಕ್ರಮ - ಮುಖ್ಯಮಂತ್ರಿ ಸಿದ್ದರಾಮಯ್ಯ

<><><><>

ಮೀಸಲಾತಿ ವಿರುದ್ಧ ಮಾತಾಡುತ್ತಿದ್ದವರು ಈಗ ಮೀಸಲಾತಿ ಪಡೆದು ಸವಲತ್ತುಗಳನ್ನು ಅನುಭವಿಸುತ್ತಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ವಿಧಾನಸೌಧದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಿದ್ದ ಡಾ.ಬಾಬು ಜಗಜೀವನ ರಾಮ್ ಅವರ ೧೧೮ ನೇ ಜನ್ಮ ದಿನೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಈಗ ಮೀಸಲಾತಿ ವಿರೋಧಿಸುವವರು ಯಾರೂ ಇಲ್ಲ ಎಂದು ಹೇಳಿದ್ದಾರೆ. ಬಾಬು ಜಗಜೀವನ್ ರಾಮ್ ಕೇಂದ್ರ ಸಚಿವರಾಗಿ ಹಸಿರು ಕ್ರಾಂತಿ ಮಾಡಿ ಎಲ್ಲರಿಗೂ ಆಹಾರ ಸಿಗುವಂತೆ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಹಿಂದೆ ನಮಗೆಲ್ಲಾ ಹಬ್ಬದ ದಿನ ಮಾತ್ರ ಅನ್ನ ಸಿಗುತ್ತಿತ್ತು. ಈ ಪರಿಸ್ಥಿತಿ ಯಾರಿಗೂ ಬರಬಾರದು, ಯಾರೂ ಹಸಿವಿನಿಂದ ಮಲಗಬಾರದು ಎನ್ನುವ ಉದ್ದೇಶದಿಂದ ಅನ್ನ ಭಾಗ್ಯ ಜಾರಿ ಮಾಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಕರ್ನಾಟಕ, ತೆಲಂಗಾಣ, ಆಂಧ್ರದಲ್ಲಿ ಮಾತ್ರ ಎಸ್‌ಸಿಪಿ-ಟಿಎಸ್‌ಪಿ ಕಾಯ್ದೆ ಜಾರಿಯಲ್ಲಿದೆ. ಸಾಮಾಜಿಕ ನ್ಯಾಯದ ಬಗ್ಗೆ ಭಾಷಣ ಮಾಡುವ ಬಿಜೆಪಿ ಆಡಳಿತದ ರಾಜ್ಯಗಳಲ್ಲಿ ಈ ಕಾಯ್ದೆ ಜಾರಿ ಮಾಡಿಲ್ಲ ಎಂದು ಮುಖ್ಯಮಂತ್ರಿ ದೂರಿದ್ದಾರೆ.

ಧ್ವನಿ : ಸಿದ್ದರಾಮಯ್ಯ (೩೪ ಸೆಕೆಂಡ್‌ಗಳು)

ಇದಕ್ಕೂ ಮೊದಲು ವಿಧಾನಸೌಧದಲ್ಲಿ ಡಾ.ಬಾಬು ಜಗಜೀವನ್ ರಾಮ್ ಅವರ ಪ್ರತಿಮೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಲಾರ್ಪಣೆ ಮಾಡಿದರು. ಈ ಸಂದರ್ಭದಲ್ಲಿ ಉಪ ಮುಖ್ಯಮಂತ್ರಿ

ಡಿ.ಕೆ.ಶಿವಕುಮಾರ್, ಗೃಹ ಸಚಿವ ಡಾ. ಜಿ.ಪರಮೇಶ್ವರ್, ಆಹಾರ ಸಚಿವ ಕೆ.ಹೆಚ್.ಮುನಿಯಪ್ಪ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

<><><><>

ರಾಜ್ಯಾದ್ಯಂತ ಹಸಿರು ಕ್ರಾಂತಿಯ ಹರಿಕಾರ, ಭಾರತದ ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನ್ ರಾಮ್ ಅವರ ೧೧೮ನೇ ಜನ್ಮ ದಿನಾಚರಣೆ ನಡೆಯಿತು. ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ನಡೆದ ಸಮಾರಂಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ದೇಶದ ಮಹಾನ್ ನಾಯಕರು ಕಂಡ ಉಜ್ವಲ ಭಾರತದ ಕನಸನ್ನು ನನಸು ಮಾಡುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದು ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ ಅಭಿಪ್ರಾಯಪಟ್ಟಿದ್ದಾರೆ. ಜಿಲ್ಲಾಡಳಿತದಿಂದ ಹಮ್ಮಿಕೊಂಡಿದ್ದ ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬೂ ಜಗಜೀವನರಾಂ ಅವರ ೧೧೮ ನೇ ಜನ್ಮ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಹಸಿವು ಮುಕ್ತ ಭಾರತ ನಿರ್ಮಾಣದಲ್ಲಿ ಬಾಬೂ ಜಗಜೀವನರಾಂ ಅವರ ಶ್ರಮ ಅಪಾರ. ಇಂತಹ ಮಹಾನ್ ನಾಯಕರ ಆದರ್ಶಗಳು ಇಂದು ಎಲ್ಲರಿಗೂ ಪ್ರೇರಣೆಯಾಗಬೇಕಿದೆ ಎಂದರು.

ಧ್ವನಿ : ಡಾ. ಪ್ರಭಾ ಮಲ್ಲಿಕಾರ್ಜುನ್ (೩೮ ಸೆಕೆಂಡ್‌ಗಳು)

ಚಿಕ್ಕಮಗಳೂರು ಜಿಲ್ಲಾಡಳಿತದ ವತಿಯಿಂದ ಬಾಬು ಜಗಜೀವನ್ ರಾಮ್ ಜಯಂತಿ ಕಾರ್ಯಕ್ರಮ ನಡೆಯಿತು. ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ ಜಾರ್ಜ್, ಕಾರ್ಯಕ್ರಮ ಉದ್ಘಾಟಿಸಿ ಬಾಬು ಜಗಜೀವನ್ ರಾಮ್ ಅವರು ದೇಶಕ್ಕೆ ನೀಡಿದ ಕೊಡುಗೆ ಹಾಗೂ ಶೋಷಿತರ ಪರವಾಗಿ ಅವರು ನಡೆಸಿದ ಹೋರಾಟಗಳನ್ನು ಸ್ಮರಿಸಿದರು. ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನರಾಂ ೧೧೮ ನೇ ಜನ್ಮ ದಿನವನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಆಚರಿಸಲಾಯಿತು. ಮಂಡ್ಯ ಜಿಲ್ಲಾಡಳಿತ, ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಬಾಬು ಜಗಜೀವನ್ ರಾಮ್ ಹಾಗೂ ಡಾ. ಬಿ.ಆರ್ ಅಂಬೇಡ್ಕರ್ ಅವರ ಪುತ್ಥಳಿಗೆ ಜಿಲ್ಲಾಧಿಕಾರಿ ಡಾ. ಕುಮಾರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಮಾಲಾರ್ಪಣೆ ಮಾಡಿದರು. ಮಾಜಿ ಉಪ ಪ್ರಧಾನಿ ಬಾಬು ಜಗಜೀವನ್ ರಾಮ್ ಜಯಂತಿ ಹಿನ್ನಲೆಯಲ್ಲಿ ನಡೆದ ಭಾವಚಿತ್ರದ ಮೆರವಣಿಗೆಗೆ ಚಿತ್ರದುರ್ಗ ಜಿಲ್ಲಾಧಿಕಾರಿ ವೆಂಕಟೇಶ್ ಚಾಲನೆ ನೀಡಿದರು. ಸಂವಿಧಾನ ಶಿಲ್ಪಿ ಭಾರತರತ್ನ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಹಸಿರು ಕ್ರಾಂತಿಯ ಹರಿಕಾರ ಬಾಬು ಜಗಜೀವನರಾಮ್ ಎರಡು ಕಣ್ಣುಗಳಿದ್ದಂತೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಬಣ್ಣಿಸಿದ್ದಾರೆ.

<><><><>

ಇಂಡಿಯನ್ ಓಶನ್ ಶಿಫ್ ಸಾಗರ್ ಗೆ ಕೇಂದ್ರ ರಕ್ಷಣಾ ಸಚಿವ ರಾಜನಾಥ ಸಿಂಗ್ ಇಂದು ಉತ್ತರಕನ್ನಡ ಜಿಲ್ಲೆಯ ಕಾರವಾರದ ಕದಂಬ ನೌಕಾನೆಲೆಯಲ್ಲಿ ಹಸಿರು ನಿಶಾನೆ ತೋರಲಿದ್ದಾರೆ. ಸೀಬರ್ಡ್ ಯೋಜನೆಯಲ್ಲಿ ಪೂರ್ಣ ಗೊಂಡ ಮೂಲಭೂತ ಸೌಕರ್ಯಗಳ ವಿವಿಧ ಅಭಿವೃದ್ಧಿ

ಯೋಜನೆಗಳನ್ನು ಇದೇ ಸಂದರ್ಭದಲ್ಲಿ ಅವರು ಉದ್ಘಾಟಿಸಲಿದ್ದಾರೆ. ಕಳೆದ ಹತ್ತು ವರ್ಷಗಳಲ್ಲಿ, ಭಾರತೀಯ ನೌಕಾಪಡೆ ಹಿಂದೂ ಮಹಾಸಾಗರ ಪ್ರದೇಶದ ಕಡಲ ದೇಶಗಳೊಂದಿಗೆ ತನ್ನ ಸಹಭಾಗಿತ್ವವನ್ನು ಹೆಚ್ಚಿಸಿದೆ. ಭಾರತೀಯ ನೌಕಾಪಡೆ ಹಿಂದೂ ಮಹಾಸಾಗರ ವಲಯದ ದೇಶಗಳ ನೌಕಾಪಡೆಗಳೊಂದಿಗೆ ಜಂಟಿ ನೌಕಾ ಕಾರ್ಯಾಚರಣೆ, ಸಂಘಟಿತ ಗಸ್ತು, ಮಾಹಿತಿ ಹಂಚಿಕೆ, ಸೌಹಾರ್ದತೆ ಪ್ರಯತ್ನಗಳು, ಸಾಮರ್ಥ್ಯ ವೃದ್ಧಿ ಮತ್ತು ಇತರ ರಾಜತಾಂತ್ರಿಕ ನಿರ್ಣಯವನ್ನು ಬಲಪಡಿಸಲು ಈ ಕಾರ್ಯಾಚರಣೆ ಸಹಾಯಕ ವಾಗಲಿದೆ. ಭಾರತ ಮತ್ತು ಒಂಬತ್ತು ವಿದೇಶಿ ರಾಷ್ಟ್ರಗಳಾದ ಕೊಮೊರೊಸ್, ಕೀನ್ಯಾ, ಮಡಗಾಸ್ಕರ್, ಮಾಲ್ದೀವ್ಸ್, ಮಾರಿಷಸ್, ಮೊಜಾಂಬಿಕ್, ಸೀಶೆಲ್ಸ್, ಶ್ರೀಲಂಕಾ, ದಕ್ಷಿಣ ಆಫ್ರಿಕಾದ ಜೊತೆ ಸೌಹಾರ್ದತೆಗಾಗಿ ಒಂದು ಸಂಯೋಜಿತ ಸಿಬ್ಬಂದಿಯೊಂದಿಗೆ ಐಎನ್‌ಎಸ್ ಸುನಯ್ನಾ ನಿಯೋಜಿಸಲಾಗಿದೆ.

<><><><>

ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ. ಸೋಮಣ್ಣ ಇಂದು ಬೆಂಗಳೂರಿನ ಪಾದರಾಯನಪುರ-ಹೊಸಹಳ್ಳಿ ನಡುವಿನ ರಸ್ತೆ ಮೇಲ್ಸೇತುವೆ ಕಾಮಗಾರಿ ಹಾಗೂ ನಾಯಂಡಹಳ್ಳಿ ರೈಲು ನಿಲ್ದಾಣಗಳ ಪರಿಶೀಲನೆ ನಡೆಸಿದರು. ಜುಲೈ ಅಂತ್ಯದೊಳಗೆ ಕಾಮಗಾರಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಅವರು ಸೂಚಿಸಿದ್ದಾರೆ. ಇದೇ ವೇಳೆ ಸಾರ್ವಜನಿಕರ ಅಹವಾಲುಗಳನ್ನು ಸಚಿವರು ಸ್ವೀಕರಿಸಿದರು. ದಕ್ಷಿಣ ಲೋಕಸಭಾ ಸದಸ್ಯರಾದ ತೇಜಸ್ವಿ ಸೂರ್ಯ, ಬೆಂಗಳೂರು ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಪ್ರೇಮ್ ನಾರಾಯಣ್, ಸೇರಿದಂತೆ ಹಲವು ರೈಲ್ವೆ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<><><><>

ಬಿಜೆಪಿ ಕಾರ್ಯಕರ್ತ ವಿನಯ್ ಸೋಮಯ್ಯ ಆತ್ಮಹತ್ಯೆ ಕುರಿತಂತೆ ಎಫ್‌ಐಆರ್ ದಾಖಲಾಗಿದ್ದು, ತನಿಖೆ ನಡೆಯುತ್ತಿದೆ. ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಸಾವಿನಲ್ಲೂ ರಾಜಕೀಯ ಮಾಡುವುದು ಸರಿಯಲ್ಲ ಎಂದು ಹೇಳಿದ್ದಾರೆ. ಬಿ.ಜೆ.ಪಿ ಕಾರ್ಯಕರ್ತ ಆತ್ಮಹತ್ಯೆ ಪ್ರಕರಣದಲ್ಲಿ ಬಿ.ಜೆ.ಪಿ ರಾಜಕೀಯ ಮಾಡುತ್ತಿದೆ ಎಂದು ಇಂಧನ ಸಚಿವ ಕೆ.ಜೆ ಜಾರ್ಜ್ ಆರೋಪಿಸಿದ್ದಾರೆ. ಚಿಕ್ಕಮಗಳೂರಿನಲ್ಲಿ ಮಾತನಾಡಿದ ಅವರು ವಿನಯ್ ಆತ್ಮಹತ್ಯೆ ದುರದೃಷ್ಟಕರ ಎಂದು ಹೇಳಿದ್ದಾರೆ. ಕಾಂಗ್ರೆಸ್ ಶಾಸಕರಾದ ಪೊನ್ನಣ್ಣ ಹಾಗೂ ಮಂಥರ್‌ಗೌಡ ಅವರ ಮೇಲೆ ದೂರು ದಾಖಲಿಸಬೇಕೆಂದು ಬಿ.ಜೆ.ಪಿ ಒತ್ತಡ ಹೇರುತ್ತಿರುವುದು ರಾಜಕೀಯ ಪ್ರೇರಿತ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

<><><><>

ಬಿಜೆಪಿ ಕಾರ್ಯಕರ್ತ ವಿನಯ್ ಸೋಮಯ್ಯ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕೊಡಗು ಜಿಲ್ಲೆಯ ಇಬ್ಬರ ಶಾಸಕರ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಆಗ್ರಹಿಸಿ ಕುಶಾಲನಗರದಲ್ಲಿ

ಬಿಜೆಪಿಯ ಸಾವಿರಾರು ಕಾರ್ಯಕರ್ತರು ಇಂದು ಪ್ರತಿಭಟನೆ ನಡೆಸಿದ್ದಾರೆ. ಬಿಜೆಪಿ ರಾಜ್ಯಧ್ಯಕ್ಷ ಬಿ.ವೈ. ವಿಜಯೇಂದ್ರ, ಸಂಸದ ಯದುವೀರ್, ಮಾಜಿ ಸಂಸದ ಪ್ರತಾಪ್ ಸಿಂಹ ಸೇರಿದಂತೆ ಹಲವು ನಾಯಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು. ಸುದ್ದಿಗಾರರೊಂದಿಗೆ ಮಾತನಾಡಿದ ವಿಜಯೇಂದ್ರ, ಕಾಂಗ್ರೆಸ್ ಕರ್ನಾಟಕದಲ್ಲಿ ಅಧಿಕಾರಕ್ಕೆ ಬಂದ ಬಳಿಕ ಇಲ್ಲಿನ ಪೊಲೀಸ್ ಠಾಣೆಗಳು ಕಾಂಗ್ರೆಸ್ ಕಛೇರಿಗಳಾಂತಾಗಿವೆ ಎಂದು ಆರೋಪಿಸಿದ್ದಾರೆ. ಬಿಜೆಪಿ ಕಾರ್ಯಕರ್ತರ ವಿರುದ್ಧ ಪ್ರಕರಣ ದಾಖಲಿಸಿ ಕಾಂಗ್ರೆಸ್ ದ್ವೇಷ ರಾಜಕೀಯ ಮಾಡುತ್ತಿದೆ ಎಂದು ದೂ ಅವರು, ಕೊಡಗಿನ ಇಬ್ಬರು ಶಾಸಕರ ವಿರುದ್ಧ ಪ್ರಕರಣ ದಾಖಲಿಸುವಂತೆ ಆಗ್ರಹಿಸಿದ್ದಾರೆ.

<><><>

ಹಾವೇರಿ ಜಿಲ್ಲೆಯ ಹಾನಗಲ್ ಪಟ್ಟಣದ ಹೊರವಲಯದಲ್ಲಿ ನಿರ್ಮಿಸುತ್ತಿರುವ ಟೋಲ್‌ಗೇಟ್‌ನಲ್ಲಿ ದಿನಕ್ಕೆ ಕನಿಷ್ಠ ೬೦ ಸಾವಿರ ರೂಪಾಯಿ ಸಂಗ್ರಹಿಸಲು ರಾಜ್ಯ ಸರ್ಕಾರ ಗುರಿ ನಿಗದಿಪಡಿಸಿದೆ. ಶಿವಮೊಗ್ಗದಿಂದ ಹಾವೇರಿ ಜಿಲ್ಲೆಯ ಗಡಿಭಾಗದ ತಡಸ ಗ್ರಾಮದವರೆಗೂ ೧೮೪ ಕಿಲೋ ಮೀಟರ್ ವ್ಯಾಪ್ತಿಯಲ್ಲಿ ರಾಜ್ಯ ಹೆದ್ದಾರಿ ನಿರ್ಮಿಸಲಾಗಿದೆ. ಈ ಪೈಕಿ ೪೩.೪೬ ಕಿಲೋ ಮೀಟರ್ ವ್ಯಾಪ್ತಿಯಲ್ಲಿ ಸಂಚರಿಸುವ ವಾಹನಗಳಿಂದ ಟೋಲ್ ಸಂಗ್ರಹ ಮಾಡಲು ಹಾನಗಲ್ ಬಳಿಯ ಕರಗುದರಿ ಸಮೀಪದಲ್ಲಿ ನೂತನ ಟೋಲ್‌ಗೇಟ್ ನಿರ್ಮಿಸಲಾಗುತ್ತಿದೆ. ಟೋಲ್ ವಸೂಲಿ ಮಾಡುವ ಜವಾಬ್ದಾರಿಯನ್ನು ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತಕ್ಕೆ ವಹಿಸಲಾಗಿದೆ.

<><><>

ಸಂಕ್ಷಿಪ್ತ ಸುದ್ದಿಗಳು

1. ಜೇವರ್ಗಿ ತಾಲೂಕಿನ ನೆಲೋಗಿ ಕ್ರಾಸ್ ಬಳಿನಿಂತಿದ್ದ ಲಾರಿಗೆ ಮಿನಿ ಬಸ್ ಡಿಕ್ಕಿ ಹೊಡೆದ ಪರಿಣಾಮ ಐವರು ಸ್ಥಳದಲ್ಲೇ ಸಾವನಪ್ಪಿದ್ದಾರೆ. ಮಿನಿ ಬಸ್ನಲ್ಲಿದ್ದ ಒಟ್ಟು ೩೧ ಜನರ ಪೈಕಿ ಐವರು ಸಾವನ್ನಪ್ಪಿದ್ದು, ೧೧ ಮಂದಿ ಗಾಯಗೊಂಡಿದ್ದಾರೆ. ಸದ್ಯ ಗಾಯಾಳುಗಳನ್ನು ಕಲಬುರಗಿಯ ಜಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ.
2. ಕಾಂಗ್ರೆಸ್ ಸರ್ಕಾರ ಜನವಿರೋಧಿ ಆಡಳಿತ ನಡೆಸುತ್ತಿದೆ ಎಂದು ಆರೋಪಿಸಿ ಜಿಲ್ಲಾಧಿಕಾರಿ ಕಚೇರಿ ಎದುರು ಹಾಸನ ಜಿಲ್ಲಾ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>